ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಖಾನಾಪೂರ.

ಸಿ.ಸಿ ನಂ: **2628/2022**

ಪಿ.ಡಬ್ಲ್ಯೂ-**1**
ಸಿ.ಡಬ್ಲ್ಯೂ-**2**

ಹೆಸರು : ಯಲ್ಲಪ್ಪಾ ಮಳಗಿ

ವಯಸ್ಸು : **42** ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸ : ಲೊಂಡಾ.

ದಿನಾಂಕ 20-02-2024 ರಂದು ಸಾಕ್ಷಿಗೆ ಪ್ರಮಾಣ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ಸಸಅ ರವರಿಂದ

ಸಾಕ್ಷಿದಾರರಿಗೆ ಈಗ ಮಹಜರನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಮಹಜರನ್ನು ನಿ.ಪಿ.1 ಎಂದು, ಸಾಕ್ಷಿದಾರರ ಸಹಿಯನ್ನು ನಿ.ಪಿ.1-ಎ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2 ವರ್ಷಗಳ ಹಿಂದೆ ಅಬಕಾರಿ ಕಚೇರಿಯಲ್ಲಿ ಮಾಡಿರುತ್ತೇನೆ. ಮಹಜರದಲ್ಲಿ ಬರೆದಿರುವ ವಿಚಾರಗಳು ಗೊತ್ತಿಲ್ಲ. ನಮ್ಮ ಸಮಕ್ಷಮ ಯಾವುದೇ ಮುದ್ದೆ ಮಾಲುಗಳನ್ನು ಅಮಾನತ್ ಪಡಿಸಿಕೊಂಡಿರುವುದಿಲ್ಲ.

***(ಸಾಕ್ಷಿಯು ಪ್ರತಿಕೂಲವಾಗಿ ಸಾಕ್ಷ್ಯ ನುಡಿಯುತ್ತಿದ್ದುದರಿಂದ ಸಸಅ ರವರ ಕೋರಿಕೆಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಸಸಅ ರವರಿಗೆ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು.)***

ಪಾಟೀ ಸವಾಲುಃ ಸಸಅ ರವರಿಂದ

ದಿನಾಂಕ 11.09.2022 ರಂದು ರೇಲ್ವೆ ನಿಲ್ದಾಣದ ಬಳಿ ನಾನು ನಿಂತಿದ್ದ ವೇಳೆ ಚಾ.ಸಾ.1 ರವರು ನನ್ನ ಬಳಿ ಬಂದು ತಮಗೆ ಬಂದ ಮಾಹಿತಿಯನ್ನು ತಿಳಿಸಿ ತಾವು ಮಾಡುವ ದಾಳಿಗೆ ಪಂಚರಾಗಿ ಸಹಕರಿಸಬೇಕೆಂದು ಕೋರಿಕೊಂಡಿರುತ್ತಾರೆಂದರೆ ಸರಿಯಲ್ಲ. ನಾವು ಒಪ್ಪಿ ಕೊಂಡ ಮೇರೆಗೆ ನಮ್ಮನ್ನು ಲೊಂಡಾ ರೇಲ್ವೆ ನಿಲ್ದಾಣಕ್ಕೆ ಕರೆದುಕೊಂಡು ಹೋಗಿ ವಾಸ್ಕೊ ಡ ಗಾಮಾ ಶಾಲಿಮಾರ ಎಕ್ಸಪ್ರೆಸ್ ಲೊಂಡಾ ರೇಲ್ವೆ ನಿಲ್ದಾಣಕ್ಕೆ ಬಂದಿದ್ದು ಸದರಿ ರೈಲಿನ ಬಿ-3 ಕೋಚ್ ನಲ್ಲಿ ತಪಾಸಣೆ ಮಾಡಿದಾಗ ಆರೋಪಿಯು ಯಾವುದೇ ಪರವಾನಿಗೆ ಇಲ್ಲದೇ ಅಕ್ರಮವಾಗಿ ಮದ್ಯದ ಬಾಟಲಿಗಳನ್ನು ಸ್ವಾಧೀನ ಇಟ್ಟುಕೊಂಡು ಸಾಗಾಟ ಮಾಡುತ್ತಿದ್ದು ಕಂಡುಬಂದಿರುತ್ತದೆ ಎಂದರೆ

ಸರಿಯಲ್ಲ. ಚಾ.ಸಾ.1 ರವರು ನನ್ನ ಸಮಕ್ಷಮ ಆರೋಪಿಯಿಂದ ಸದರಿ ಮದ್ಯದ ಬಾಟಲಿಗಳನ್ನು ಅಮಾನತಪಡಿಸಿಕೊಂಡು ಮಹಜರ ಕ್ರಮ ಜರುಗಿಸಿರುತ್ತಾರೆಂದರೆ ಸರಿಯಲ್ಲ. ರಾಸಾಯನಿಕ ಪರೀಕ್ಷೆಗಾಗಿ ತಲಾ ಒಂದೊಂದು ಬಾಟಲಿಯನ್ನು ಪ್ರತ್ಯೇಕವಾಗಿ ತೆಗೆದು ಸೀಲು ಮಾಡಿರುತ್ತಾರೆಂದರೆ ಸರಿಯಲ್ಲ. ಎಲ್ಲಾ ವಿಚಾರ ತಿಳಿದುಕೊಂಡು ನಾನು ಮಹಜರ್ ಗೆ ಸಹಿ ಮಾಡಿರುತ್ತೇನೆಂದರೆಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ</u>

ಏನೂ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಖಾನಾಪೂರ.